ಪ್ರತಿಯನ್ನು ನಮಗೆ ಒದಗಿಸಬೇಕು ನಂತರ ಬಿಲ್ಲಿನ ಮೇಲೆ ತಾವು ಓದಿಕೊಂಡರೆ ಉತ್ತಮ ಎಂದು ನನಗನ್ನಿಸುತ್ತದೆ.

ಉಪಾಧ್ಯಕ್ಷರು : ಈಗಾಗಲೇ ಬಿಲ್ಲಿನ ಪ್ರತಿಗಳನ್ನು ಎಲ್ಲರಿಗೂ ಒದಗಿಸಲಾಗಿದೆ.

5) 1999ರ ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) (ತಿದ್ದುಪಡಿ) ವಿಧೇಯಕ

ಶ್ರೀ ಎಂ. ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ವಾರ್ತಾ ಮತ್ತು ಪ್ರಚಾರ ಸಚಿವರು (ಕಂದಾಯ ಸಚಿವರ ಪರವಾಗಿ) : ಮಾನ್ಯ ಉಪಾಧ್ಯಕ್ಷರೆ, 1999ರ ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ "1999ರ ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕವನ್ನು ಮಂಡಿಸಲು ಅನುಮತಿ ನೀಡಲಾಯಿತು

ಶ್ರೀ ಎಂ. ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ವಾರ್ತಾ ಮತ್ತು ಪ್ರಚಾರ ಸಚಿವರು) (ಕಂದಾಯ ಸಚಿವರ ಪರವಾಗಿ) : ಮಾನ್ಯ ಉಪಾಧ್ಯಕ್ಷರೆ, 1999ರ ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು :- *ವಿಧೇಯಕವನ್ನು ಮಂಡಿಸಲಾಗಿದೆ *

6) 1999ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ

ಶ್ರೀ ಎಂ. ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ವಾರ್ತಾ ಮತ್ತು ಪ್ರಚಾರ ಸಚಿವರು (ಬೆಂಗಳೂರು ನಗರಾಭಿವೃದ್ಧಿ ಸಚಿವರ ಪರವಾಗಿ) : ಮಾನ್ಯ ಉಪಾಧ್ಯಕ್ಷರೆ, 1999ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ "1999ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕವನ್ನು ಮಂಡಿಸಲು ಅನುಮತಿ ನೀಡಲಾಯಿತು

ಶ್ರೀ ಎಂ. ಪಿ. ಪ್ರಕಾಶ್ : (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ವಾರ್ತಾ ಮತ್ತು ಪ್ರಚಾರ ಸಚಿವರು) (ಬೆಂಗಳೂರು ನಗರಾಭಿವೃದ್ಧಿ ಸಚಿವರ ಪರವಾಗಿ) : ಮಾನ್ಯ ಉಪಾಧ್ಯಕ್ಷರೆ, 1999ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು : **ವಿಧೇಯಕವನ್ನು ಮಂಡಿಸಲಾಗಿದೆ.**

---

*ಸಹಬಂಧ V

** ಸಹಬಂಧ VI